## ಕರ್ನಾಟಕ ಸರ್ಕಾರ

ಸಂಖ್ಯೆ: MWD 55 MDS 2021(P)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು,
ದಿನಾಂಕ:19.11.2021.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

**ಇವರಿಗೆ;**

1. ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

2. ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ,
ಬೆಂಗಳೂರು.

387

**ಮಾನ್ಯರೇ,**

**ವಿಷಯ:-** 2021-22ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕೆ ಮೀರಿ ಹೆಚ್ಚುವರಿ ಅನುದಾನ ಕೋರಿ ಸಲ್ಲಿಸುತ್ತಿರುವ ಪ್ರಸ್ತಾವನೆಗಳ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನ ಆಯವ್ಯಯದಲ್ಲಿ ಕೋವಿಡ್-19 ರ ಹಿನ್ನೆಲೆಯಲ್ಲಿ ಅನುದಾನವನ್ನು ಕಡಿತಗೊಳಿಸಿ ಒದಗಿಸಲಾಗಿರುತ್ತದೆ. ಆದರೆ ಅನುದಾನದ ಲಭ್ಯತೆಗನುಗುಣವಾಗಿ ಪ್ರಸ್ತಾವನೆಗಳನ್ನು ಸಲ್ಲಿಸದೇ ಅನುದಾನದ ಮಿತಿಯನ್ನು ಮೀರಿ ಅನೇಕ ಪ್ರಸ್ತಾವನೆಗಳು ತಮ್ಮಿಂದ ಸರ್ಕಾರಕ್ಕೆ ಸಲ್ಲಿಕೆಯಾಗುತ್ತಿವೆ.

ಆದ್ದರಿಂದ, ಇನ್ನು ಮುಂದೆ ಸನ್ಮಾನ್ಯ ಮುಖ್ಯಮಂತ್ರಿಯವರು/ಸರ್ಕಾರದಿಂದ, ಪ್ರಸ್ತಾವನೆಗಳಿಗೆ ಮಂಜೂರಾತಿ/ಹೆಚ್ಚುವರಿ ಅನುದಾನ ಹಂಚಿಕೆಯ ಬಗ್ಗೆ ಸ್ಪಷ್ಟ ನಿರ್ದೇಶನವಿರುವ ಪ್ರಸ್ತಾವನೆಗಳನ್ನು ಹೊರತುಪಡಿಸಿ ನಿಗದಿತ ಅನುದಾನವನ್ನು ಮೀರಿ ಯಾವುದೇ ಹೆಚ್ಚುವರಿ ಅನುದಾನ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಬಾರದೆಂದು ತಮಗೆ ಸೂಚಿಸಲಾಗಿದೆ. ಒಂದು ವೇಳೆ ಇಂತಹ ಪ್ರಸ್ತಾವನೆಗಳು ತಮ್ಮಿಂದ ಸ್ವೀಕೃತವಾದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿ, ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಪರಿಶೀಲಿಸಲಾಗುವುದೆಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

19/11/2021

(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ

20/11/21